# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಿನಾಂಕ:26-01-2020ರ ಗಣರಾಜ್ಯೋತ್ಸವ ದಿನಾಚರಣೆ ಆಚರಿಸುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ: ಡಿಕೆಸಿ/34011/109/2019, ದಿನಾಂಕ:17-01-2020.

ಪ್ರಸ್ತಾವನೆ:

ಗಣರಾಜ್ಯೋತ್ಸವ ಆಚರಣೆಯನ್ನು ದಿನಾಂಕ:26-01-2020ರಂದು ರವೀಂದ್ರ ಕಲಾಕ್ಷೇತ್ರ ಸೇರಿದಂತೆ ಬೆಂಗಳೂರಿನ 16 ವಿವಿಧ ಕೇಂದ್ರಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿರುತ್ತದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಕಲಾವಿದರ ಗೌರವ ಸಂಭಾವನೆ ಹಾಗೂ ಸಂಘಟನಾ ವ್ಯವಸ್ಥೆಗಳ ವೆಚ್ಚಗಳು ಸೇರಿದಂತೆ ಒಟ್ಟು ರೂ.40.00 ಲಕ್ಷಗಳ ಅವಶ್ಯಕತೆ ಇರುತ್ತದೆ. ಈಗಾಗಲೇ ರಾಷ್ಟ್ರೀಯ ಹಬ್ಬಗಳಿಗಾಗಿ ಕ್ರಿಯಾ ಯೋಜನೆಯಲ್ಲಿ ಒದಗಿಸಿದ ಮೊತ್ತದಲ್ಲಿ ರೂ.25.00 ಲಕ್ಷಗಳು ಮಾತ್ರ ಲಭ್ಯವಿರುತ್ತದೆ. ಈ ಹಿನ್ನೆಲೆಯಲ್ಲಿ ಲೆಕ್ಕಶೀರ್ಷಿಕೆ:2205-00-102-0-80-059ಯಡಿ ಗಾಂಧೀಜಿ-150ನೇ ಸ್ಮರಣೋತ್ಸವ ಕಾರ್ಯಕ್ರಮಕ್ಕೆ ಒದಗಿಸಿರುವ ರೂ.130.00 ಲಕ್ಷಗಳಿಂದ ವೆಚ್ಚವಾಗಿ, ಉಳಿದಿರುವ ಮೊತ್ತದಿಂದ ರೂ.15.00 ಲಕ್ಷಗಳ ವೆಚ್ಚ ಭರಿಸಿ, ಸಂಬಂಧಿಸಿದವರಿಗೆ ಬಿಡುಗಡೆ ಮಾಡಲು ಸರ್ಕಾರದ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 62 ಕಸಧ 2020, ಬೆಂಗಳೂರು, ದಿನಾಂಕ:15-02-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ:26-01-2020ರಂದು ರವೀಂದ್ರ ಕಲಾಕ್ಷೇತ್ರ ಸೇರಿದಂತೆ ಬೆಂಗಳೂರಿನ 16 ವಿವಿಧ ಕೇಂದ್ರಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಿದ್ದು, ಈ ಕಾರ್ಯಕ್ರಮಕ್ಕೆ ರೂ.15.00ಲಕ್ಷ (ರೂಪಾಯಿ ಹದಿನೈದು ಲಕ್ಷಗಳು ಮಾತ್ರ)ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರಿಗೆ ವೆಚ್ಚ ಭರಿಸಿ, ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1) ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಣ ಮಂಜೂರು ಮಾಡಿದ್ದು, ಅದೇ ಉದ್ದೇಶಕ್ಕೆ ಬಳಸತಕ್ಕದ್ದು.

2) ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.

ಈ ವೆಚ್ಚವನ್ನು 2019-20ನೇ ಸಾಲಿನ ವೃತ್ತಿನಾಟಕ ಕಂಪನಿಗಳಿಗೆ ಧನಸಹಾಯ ಶೀರ್ಷಿಕೆ 2205-00-102-0-80-059ಅಡಿ ಭರಿಸತಕ್ಕದ್ದು.

2...

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 2020. ದಿನಾಂಕ:13-01-2020ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malathi PS 15/2/20
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
15/2/20 (ಸಂಸ್ಕೃತಿ ಶಾಖೆ)

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸಂಬಂಧಿಸಿದವರಿಗೆ (ಇಲಾಖಾ ನಿರ್ದೇಶಕರ ಮುಖಾಂತರ).
5. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.